ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊಸದುರ್ಗ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ: **130/2023**

ಪಿ.ಡಬ್ಲ್ಯೂ**-6**
ಸಿ.ಡಬ್ಲ್ಯೂ**-3**

ಸಾಕ್ಷಿಗೆ ದಿನಾಂಕ **28.02.2026** ರಂದು ಪ್ರಮಾಣ ವಚನ ಬೋಧಿಸಲಾಯಿತು.

ಸಾಕ್ಷಿಯ ಹೆಸರು : ವೆಂಕಟೇಶ
ತಂದೆಯ ಹೆಸರು : ರಾಮಲಿಂಗಪ್ಪ
ವಯಸ್ಸು : 42 ವರ್ಷ
ಉದ್ಯೋಗ : ವ್ಯವಸಾಯ
ವಾಸಸ್ಥಳ : ನಾಗರಕಟ್ಟೆ ಹಾಲಿ ಹೊಸದುರ್ಗ .

ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ

ಈಗ ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿಗಳ ಪರಿಚಯವಿರುವುದಿಲ್ಲ. ಚಾಸಾ-2 ರವರ ಪರಿಚಯವಿರುವುದಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ.

ಸಾಕ್ಷಿ ಈಗ ನಿಪಿ**-2** ರ ಕೃತ್ಯ ಸ್ಥಳಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ**-2(**ಸಿ**)** ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ-3 ರ ಕಚ್ಚಾ ನಕಾಶೆಯಲ್ಲಿನ ಸಹಿ ನೋಡಿ ಗುರುತಿಸಿದ್ದು ಸಹಿಯನ್ನು ನಿಪಿ-3(ಸಿ) ಎಂದು ಗುರುತಿಸಲಾಯಿತು. ಸಾಕ್ಷಿ ಪಂಚರ ನೋಟೀಸಿನಲ್ಲಿನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ-4 ಎಂದು ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು.

ಸಹಿಯನ್ನು ಸುಮಾರು 3 ವರ್ಷಗಳ ಹಿಂದೆ ಚಾಸಾ -1 ರವರ ಮನೆ ಹತ್ತಿರ ಪೊಲೀಸರ ಸೂಚನೆ ಮೇರೆಗೆ ಮಾಡಿರುತ್ತೇನೆ. ಬೇರೆ ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಸಮಯ ಮತ್ತು ದಿನಾಂಕ ನನಗೆ ನೆನಪಿಲ್ಲ. ಪೋಲಿಸರು ನನ್ನ ಸಮಕ್ಷಮ ಮಹಜರ್ ಮಾಡಿ ಯಾವುದೇ ಸ್ವತ್ತನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ನಿಪಿ 2 ರಿಂದ 4 ರಲ್ಲಿನ ವಿಚಾರಗಳು ನನಗೆ ಗೊತ್ತಿಲ್ಲ.

(ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದ್ದು ಸಕಾರಣಗಳನ್ನು ಮನಗಂಡು ಅನುಮತಿ ನೀಡಲಾಯಿತು)

ಪಾಟೀ ಸವಾಲು ಮಾನ್ಯ ಸ.ಸ.ಅ.ರವರಿಂದ

ದಿಃ 01.09.2022 ರಂದು ನೆಡೆದ ಚಾಸಾ 1 ರವರ ಮೇಲಿನ ಹಲ್ಲೆಯ ಪ್ರಕರಣಕ್ಕೆ ಸಂಬಂಧಿಸಿದಂತೆ ದಿನಾಂಕ 02.09.2022 ರಂದು ಪೋಲಿಸರು ಕೃತ್ಯ ಸ್ಥಳಕ್ಕೆ ಬಂದಿದ್ದು, ನಿಪಿ-4 ರಂತೆ ನನಗೆ ನೋಟೀಸ್ ನೀಡಿರುತ್ತಾರೆ ಎಂದರೆ ಸರಿಯಲ್ಲ . ನನ್ನ ಮತ್ತು ಚಾಸಾ-2 ರವರ ಸಮಕ್ಷಮ ನಿಪಿ-2 ರಂತೆ ಬೆಳಗ್ಗೆ 10 ರಿಂದ 10.30 ಗಂಟೆ ವರೆಗೆ ಪೋಲಿಸರು ಮಹಜರ್ ಕ್ರಮ ಜರುಗಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ . ಕೃತ್ಯ ಸ್ಥಳದಲ್ಲಿ ಚಾಸಾ-1 ರವರು ಹಾಜರು ಮಾಡಿದ ಕಲ್ಲನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ . ಸ್ಥಳದಲ್ಲಿ ನಿಪಿ-3 ರಂತೆ ಕಚ್ಚಾ ನಕಾಶೆ ತಯಾರಿಸಿರುತ್ತಾರೆ ಎಂದರೆ ಸರಿಯಲ್ಲ . ನಿಪಿ-2 ಕ್ಕೆ ನಾನು , ಚಾಸಾ -1, 2 ರವರು ಸ್ಥಳದಲ್ಲಿ ಸಹಿ ಮಾಡಿರುತ್ತೇವೆ ಎಂದರೆ ನನಗೆ ಗೊತ್ತಿಲ್ಲ . ನಾನು ನಿಪಿ-2 ರಂತೆ ಕೃತ್ಯ ಸ್ಥಳ ಮತ್ತು ಅಮಾನತ್ತು ಪಂಚನಾಮೆ ಸಮಯದಲ್ಲಿ ಹಾಜರಿದ್ದು , ಮುದ್ದೆ ಮಾಲು-1 ರ ಕಲ್ಲನ್ನು ಅಮಾನತ್ತುಪಡಿಸಿಕೊಂಡು ಅದಕ್ಕೆ ನಾನು ಸಹಿ ಮಾಡಿದರೂ ಸಹ ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿಗಳ ಪರವಾಗಿ ಶ್ರೀ ಆರ್ ವೈ ವಕೀಲರಿಂದಃ

ಆರೋಪಿ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ಸಲ್ಲಿಸಿರುತ್ತಾರೆ.

ಮರು ವಿಚಾರಣೆ ಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)
ಓ.ಹೇ.ಕೆ.ಸರಿ ಇದೆ.

(ಪ್ರಸನ್ನಕುಮಾರ್ ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು,
ಹೊಸದುರ್ಗ.